# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಜಂಟಿ ನಿರ್ದೇಶಕರು, ಕಟ್ಟಡ ಪರವಾನಗಿ (ದಕ್ಷಿಣ) ರವರ ಕಛೇರಿ, ಎನ್.ಆರ್.ವೃತ್ತ, ಬೆಂಗಳೂರು –02.

ಸಂಖ್ಯೆ: ಜನಿಕಪ (ದ)/ಪ್ರಾ.ಪ/ಸನಿ/42/2019-20 ದಿನಾಂಕ: 07-01-2020.

## ಭಾಗಶಃ ಪ್ರಾರಂಭಿಕ ಪ್ರಮಾಣ ಪತ್ರ

**ವಿಷಯ:** ಸಂಖ್ಯೆ 04, ಪಿಐಡಿ ಸಂಖ್ಯೆ 63-48-4, ನ್ಯೂ ಆಡುಗೋಡಿ ರಸ್ತೆ, ದಕ್ಷಿಣ ವಲಯ, ವಾರ್ಡ್ ಸಂಖ್ಯೆ 146, ಬೆಂಗಳೂರು ಇಲ್ಲಿ ನಿರ್ಮಿಸಲಾಗುತ್ತಿರುವ ಬಿಲ್ಡಿಂಗ್ 603 ರಲ್ಲಿ ನೆಲ+ಮೇಲಿನ 14 ಅಂತಸ್ತು, ಬಿಲ್ಡಿಂಗ್ 605 ರಲ್ಲಿ ನೆಲ+ಮೇಲಿನ 6 ಅಂತಸ್ತುಗಳ ಐಟಿ / ಬಿಟಿ (ಆಫೀಸ್) ಕಟ್ಟಡಕ್ಕೆ ಪ್ರಾರಂಭಿಕ ಪ್ರಮಾಣ ಪತ್ರ ನೀಡುವ ಬಗ್ಗೆ.

**ಉಲ್ಲೇಖ:** 1) ಅರ್ಜಿದಾರರ ಪ್ರಾರಂಭಿಕ ಪ್ರಮಾಣ ಪತ್ರ ನೀಡಲು ಕೋರಿರುವ ಮನವಿ ದಿನಾಂಕ: 12-07-2019.
2) ನಕ್ಷೆ ಮಂಜೂರಾತಿ ಸಂಖ್ಯೆ: BBMP/Addl.Dir / JD South / 0039/17-18 ದಿನಾಂಕ: 10-09-2018.
3) ಅಪರ ನಿರ್ದೇಶಕರು, ಕಟ್ಟಡ ಪರವಾನಗಿ ಕೋಶ ರವರ ಅನುಮೋದನೆ ದಿನಾಂಕ: 26-11-2019.

*****

ಸಂಖ್ಯೆ 04, ಪಿಐಡಿ ಸಂಖ್ಯೆ 63-48-4, ನ್ಯೂ ಆಡುಗೋಡಿ ರಸ್ತೆ, ದಕ್ಷಿಣ ವಲಯ, ವಾರ್ಡ್ ಸಂಖ್ಯೆ 146, ಬೆಂಗಳೂರು ಇಲ್ಲಿನ ಪ್ರಸ್ತಾಪಿತ ಸ್ವತ್ತಿಗೆ ಎಲ್.ಪಿ ಸಂಖ್ಯೆ: BBMP/Addl.Dir/ JD South/ LP 0039/17-18 ದಿನಾಂಕ: 10-09-2018 ರಂದು ಬಿಲ್ಡಿಂಗ್ 603 ರಲ್ಲಿ ನೆಲ+ಮೇಲಿನ 14 ಅಂತಸ್ತು, ಬಿಲ್ಡಿಂಗ್ 605 ರಲ್ಲಿ ನೆಲ+ಮೇಲಿನ 6 ಅಂತಸ್ತುಗಳ ಐಟಿ / ಬಿಟಿ (ಆಫೀಸ್) ಬಿಲ್ಡಿಂಗ್ 606 ರಲ್ಲಿ ನೆಲ+ಮೇಲಿನ 2 ಅಂತಸ್ತುಗಳ ಡೈನಿಂಗ್ ಹಾಲ್ ಮತ್ತು ಬಿಲ್ಡಿಂಗ್ 607 ರಲ್ಲಿ ನೆಲ ಅಂತಸ್ತುಗಳ ಸ್ವಾಗತಗಾರರ ಕೊಠಡಿ ಕಟ್ಟಡಗಳಿಗೆ ನಕ್ಷೆ ಮಂಜೂರಾತಿ ನೀಡಲಾಗಿದ್ದು, ಉಲ್ಲೇಖ (1) ರ ಮನವಿಗೆ ಸಂಬಂಧಿಸಿದಂತೆ, ಬಿಲ್ಡಿಂಗ್ 603 ರಲ್ಲಿ ನೆಲ+ಮೇಲಿನ 14 ಅಂತಸ್ತು, ಬಿಲ್ಡಿಂಗ್ 605 ರಲ್ಲಿ ನೆಲ+ಮೇಲಿನ 6 ಅಂತಸ್ತುಗಳ ಐಟಿ / ಬಿಟಿ (ಆಫೀಸ್) ಕಟ್ಟಡಕ್ಕೆ ಪ್ರಾರಂಭಿಕ ಪ್ರಮಾಣ ಪತ್ರ ನೀಡುವ ಸಲುವಾಗಿ ದಿನಾಂಕ: 16-09-2019 ರಂದು ಸ್ಥಳ ಪರಿಶೀಲಿಸಲಾಗಿ ಮಂಜೂರಾತಿ ನಕ್ಷೆಯನ್ವಯ ಅಗತ್ಯ ನಡುಜಾಗಗಳನ್ನು ಬಿಟ್ಟು ಆರ್.ಸಿ.ಸಿ ಕಂಬಗಳನ್ನು ನಿರ್ಮಿಸಿದ್ದು, ಸದರಿ ಪ್ರಸ್ತಾವನೆಗೆ ಉಲ್ಲೇಖ (3) ರಂತೆ ಅಪರ ನಿರ್ದೇಶಕರು, ಕಟ್ಟಡ ಪರವಾನಗಿ ಕೋಶ ರವರು ಅನುಮೋದನೆ ನೀಡಿರುತ್ತಾರೆ. ಪ್ರಾರಂಭಿಕ ಪ್ರಮಾಣ ಪತ್ರಕ್ಕೆ ಅಗತ್ಯ ಶುಲ್ಕವಾದ ರೂ. 52,24,000/–ಗಳನ್ನು ಅರ್ಜಿದಾರರಿಂದ ರಸೀದಿ ಸಂಖ್ಯೆ: RE-ifms624-TP/000141 ದಿನಾಂಕ: 10-12-2019 ರಂದು ಸಂದಾಯಿಸಿಕೊಳ್ಳಲಾಗಿದೆ. ಆದುದರಿಂದ ಸದರಿ ಸ್ವತ್ತಿನಲ್ಲಿ ನಿರ್ಮಿಸುತ್ತಿರುವ ಬಿಲ್ಡಿಂಗ್ 603 ರಲ್ಲಿ ನೆಲ+ಮೇಲಿನ 14 ಅಂತಸ್ತು, ಬಿಲ್ಡಿಂಗ್ 605 ರಲ್ಲಿ ನೆಲ+ಮೇಲಿನ 6 ಅಂತಸ್ತುಗಳ ಐಟಿ / ಬಿಟಿ (ಆಫೀಸ್) ಕಟ್ಟಡಕ್ಕೆ ಪ್ರಾರಂಭಿಕ ಪ್ರಮಾಣ ಪತ್ರವನ್ನು ಈ ಕೆಳಕಂಡ ಷರತ್ತಿಗೊಳಪಡಿಸಿ ನೀಡಲಾಗಿದೆ.

1) ಕಟ್ಟಡ ಕಾಮಗಾರಿಯನ್ನು ಮಂಜೂರಾತಿ ನಕ್ಷೆಯಂತೆ ನಿಯಮಾನುಸಾರ ನಿರ್ಮಿಸತಕ್ಕದ್ದು.
2) ಕಟ್ಟಡ ನಿರ್ಮಾಣದ ಪ್ರಗತಿಯನ್ನು ಕಾಲಾನುಸಾರ ಸಂಬಂಧಪಟ್ಟ ಕಛೇರಿಗೆ ಮಾಹಿತಿಯನ್ನು ನೀಡಿ ಮಂಜೂರಾತಿ ನಕ್ಷೆಯಂತೆ ನಿರ್ಮಿಸುತ್ತಿರುವ ಬಗ್ಗೆ ಪರಿವೀಕ್ಷಣೆಗೆ ಒಳಪಡಿಸತಕ್ಕದ್ದು.

ಜಂಟಿ ನಿರ್ದೇಶಕರು, ಕಟ್ಟಡ ಪರವಾನಗಿ (ದಕ್ಷಿಣ)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

O/o. Joint Director Building License (South)

07/01/2020 07/01/2020 07/01/2020

16/01/2020



Scanned with CamScanner

3) ಕಟ್ಟಡ ನಿರ್ಮಾಣದ ಸ್ಥಳದಲ್ಲಿ ಅಕ್ಕ-ಪಕ್ಕದವರಿಗೆ ತೊಂದರೆಯಾಗದಂತೆ ಹಾಗೂ ಕೆಲಸಗಾರರಿಗಾಗಿ ಶೆಡ್ ಮತ್ತು ತಾತ್ಕಾಲಿಕ ಶೌಚಾಲಯಗಳನ್ನು ನಿರ್ಮಿಸತಕ್ಕದ್ದು.

4) ನಕ್ಷೆ ಮಂಜೂರಾತಿ ಪಡೆದ ದಿನಾಂಕದಿಂದ ಐದು ವರ್ಷದೊಳಗಾಗಿ ಕಟ್ಟಡದ ಕಾಮಗಾರಿಯನ್ನು ಪೂರ್ಣಗೊಳಿಸಿ ಸ್ವಾಧೀನಾನುಭವ ಪ್ರಮಾಣ ಪತ್ರವನ್ನು ಪಡೆಯತಕ್ಕದ್ದು.

5) ಕಟ್ಟಡ ನಿರ್ಮಾಣ ಮತ್ತು ಕಟ್ಟಡ ತೆರವಿನ ತ್ಯಾಜ್ಯದ ನಿರ್ವಹಣೆ ಮತ್ತು ವಿಲೇವಾರಿಯನ್ನು ಮಾಡಲು ಘನತ್ಯಾಜ್ಯ ನಿರ್ವಹಣೆ (ಎಸ್.ಡಬ್ಲ್ಯೂ.ಎಂ) ಉಪನಿಯಮ 2016 ರಂತೆ ನಿರ್ವಹಿಸುವುದು.

6) ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯಿಂದ ಸಂಸ್ಕರಿಸಿದ (Treated Water Utilisation for Construction) ನೀರನ್ನು ಕಟ್ಟಡ ನಿರ್ಮಾಣ ಕಾರ್ಯಕ್ಕೆ ಕಡ್ಡಾಯವಾಗಿ ಒಳಸಿಕೊಳ್ಳುವುದು.

7) ಅರ್ಜಿದಾರರು ವಿದ್ಯುತ್ ಚಾಲಿತ ವಾಹನಗಳ ಚಾರ್ಜಿಂಗ್ ಪಾಯಿಂಟ್‌ಗಳನ್ನು ಅಳವಡಿಸಲು ಅಗತ್ಯ ಕ್ರಮವಹಿಸುವುದು.

8) ಅರ್ಜಿದಾರರು ಪ್ರತಿ 240.00 ಚ.ಮೀ ಅನುಪಾತ ವಿಸ್ತೀರ್ಣಕ್ಕೆ ಒಂದರಂತೆ ಗಿಡವನ್ನು ನೆಡುವುದು.

ಸಹಿ/-
ಜಂಟಿ ನಿರ್ದೇಶಕರು, ಕಟ್ಟಡ ಪರವಾನಗಿ (ದಕ್ಷಿಣ)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಗೆ

M/s Bosch Ltd.,
Khata No 4, PID No 63-48-4
New Audugodi road, Lakkasandra
South Zone W No 146, Bangalore

**ಪ್ರತಿಯನ್ನು:** ಕಾರ್ಯಪಾಲಕ ಅಭಿಯಂತರರು / ಸಹಾಯಕ ಕಾರ್ಯಪಾಲಕ ಅಭಿಯಂತರರು, ಕೋರಮಂಗಲ ಉಪ ವಿಭಾಗ ರವರಿಗೆ ಮಾಹಿತಿಗಾಗಿ ಮತ್ತು ಕ್ರಮಕ್ಕಾಗಿ.

ಜಂಟಿ ನಿರ್ದೇಶಕರು, ಕಟ್ಟಡ ಪರವಾನಗಿ (ದಕ್ಷಿಣ)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

7/01/2020 7/01/2020 07/01/2020



Scanned with CamScanner